# Akashvani : Bangalore
# Regional Bulletin In Kannada
# 09.07.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಅಭಿವೃದ್ಧಿ, ಪಾರದರ್ಶಕತೆ, ಶಿಸ್ತು ರಾಜ್ಯ ಸರ್ಕಾರದ ಮೂಲ ಮಂತ್ರ -ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ರಾಜ್ಯಾದ್ಯಂತ ಎಸ್ಐಆರ್ ಪ್ರಕ್ರಿಯೆ; ನಿಯಮಾನುಸಾರ ನಡೆಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

೩. ಸುಪ್ರೀಂಕೋರ್ಟ್ ಆದೇಶದ ಅನ್ವಯ ಬೆಂಗಳೂರಿನಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು- ಸಚಿವ ಕೃಷ್ಣಬೈರೇಗೌಡ

೪. ರಾಜ್ಯದಲ್ಲಿ ಮುಂಗಾರು ಬಿರುಸು; ಮುಂದಿನ ೨೪ ಗಂಟೆಗಳಲ್ಲಿ ಕೊಡಗು, ಮಲೆನಾಡಿನಲ್ಲಿ ಭಾರೀ ಮಳೆ ಸಾಧ್ಯತೆ- ಹವಾಮಾನ ಇಲಾಖೆ ಮುನ್ಸೂಚನೆ

---

ಅಭಿವೃದ್ಧಿ, ಪಾರದರ್ಶಕತೆ ಮತ್ತು ಶಿಸ್ತು ರಾಜ್ಯ ಸರ್ಕಾರದ ಮೂರು ಮೂಲ ಮಂತ್ರಗಳಾಗಿವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಇಂದು ಜರುಗಿದ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ, ಜನರ ಬಳಿ ಸರಕಾರ ಇರಬೇಕು ಎಂಬುದು ಮೊದಲ ಆದ್ಯತೆಯಾಗಿದ್ದು, ಕಚೇರಿಗೆ ಜನರನ್ನು ಅಲೆಸುವುದು ನಿಲ್ಲಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜನರ ಬಳಿಗೆ ಸರಕಾರ ಇರಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು, ಗ್ರಾಮಲೆಕ್ಕಾಧಿಕಾರಿಗಳು ಸೇರಿದಂತೆ ಎಲ್ಲ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಕೇಂದ್ರ ಸ್ಥಾನದಲ್ಲಿದ್ದುಕೊಂಡು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದರು.

ಜನರ ಅಹವಾಲು ಪರಿಹರಿಸಲು ಪ್ರಜಾಸೇವಾ ಇಲಾಖೆ ಆರಂಭಿಸಲಾಗಿದ್ದು, ಈ ಇಲಾಖೆಗೆ ಒಬ್ಬ ಪ್ರತ್ಯೇಕ ಮಂತ್ರಿಯೊಬ್ಬರನ್ನು ನಿಯೋಜಿಸಲಾಗುವುದು ಎಂದು ಅವರು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ಆಯ್ದ ತಾಲ್ಲೂಕುಗಳಲ್ಲಿ ಪ್ರಜಾಸೇವಾ ಇಲಾಖೆಯಿಂದ ಜನಸಂಪರ್ಕ ಸಭೆಗಳನ್ನು ನಡೆಸಿ ಜನರ ಸಮಸ್ಯೆ ಬಗೆಹರಿಸಬೇಕು ಎಂದು ನಿರ್ದೇಶನ ನೀಡಿದರು.

ಗ್ರಾಮೀಣ ಮಕ್ಕಳಿಗೂ ನಗರಮಟ್ಟದ ಶಿಕ್ಷಣ ದೊರೆಯಬೇಕು, ಈ ನಿಟ್ಟಿನಲ್ಲಿ ಕೆಪಿಎಸ್ ಶಾಲೆಗಳ ಮಾದರಿಯಂತೆ ಕನಿಷ್ಠ ೨ ಸಾವಿರ ಸಿಎಸ್ಆರ್ ಶಾಲೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ.

ಇದಲ್ಲದೇ ಆಯಾ ಜಿಲ್ಲೆಯ ದೊಡ್ಡ ಶಿಕ್ಷಣ ಸಂಸ್ಥೆಗಳು ಮೂರು ಶಾಲೆಗಳನ್ನು ದತ್ತು ಪಡೆದುಕೊಳ್ಳುವಂತೆ ಕ್ರಮ ವಹಿಸಲಾಗುವುದು, ಎಲ್ಲರಿಗೂ ಗುಣಮಟ್ಟದ ಪ್ರಾಥಮಿಕ ಶಿಕ್ಷಣ ಒದಗಿಸಬೇಕು ಎಂಬುದು ನಮ್ಮ ಆಶಯವಾಗಿದೆ. ಯುವ ಜನತೆಯ ಉದ್ಯೋಗಾವಕಾಶಗಳಿಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ ಯುವ ಉದ್ಯೋಗ ಸೇತು ಕಾರ್ಯಕ್ರಮವನ್ನು ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರತಿಯೊಬ್ಬ ಅರ್ಹ ವ್ಯಕ್ತಿಗೆ ಮತದಾನ ಹಕ್ಕು ನೀಡಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ. ಯಾವುದೇ ಪಕ್ಷದ ಜನಪ್ರತಿನಿಧಿಗಳ ಒತ್ತಡಕ್ಕೆ ಮಣಿಯದೇ ಎಲ್ಲ ಬಿ.ಎಲ್.ಓ.ಗಳು ನಿಯಮಾನುಸಾರ ಮನೆಮನೆಗೆ ಹೋಗಿ ಗಣತಿ ನಮೂನೆಗಳನ್ನು ವಿತರಿಸಬೇಕು. ಮತದಾನದ ಹಕ್ಕು ಪಡೆದುಕೊಳ್ಳಲು ಪ್ರತಿಯೊಬ್ಬರು ಅಗತ್ಯ ಕ್ರಮ ವಹಿಸಬೇಕು ಎಂದು ನಾಗರಿಕರಿಗೆ ಸಲಹೆ ನೀಡಿದರು. ಯಾರೂ ಮತದಾನ ಹಕ್ಕುಗಳಿಂದ ವಂಚಿತರಾಗಬಾರದು ಎಂದು ಹೇಳಿದರು.

ದೇಶದ ಸಮಗ್ರತೆ, ಐಕ್ಯತೆ ಕಾಪಾಡಲು ಭಾರತ ಜೋಡೋ ಯುವಕ ಸಂಘ ಸ್ಥಾಪಿಸಿ ಪ್ರತಿ ಪಂಚಾಯಿತಿಗೆ ಹತ್ತು ಲಕ್ಷ ರೂಪಾಯಿ ನೀಡಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ರಾಜ್ಯದಲ್ಲಿ ಹತ್ತು ಸಾವಿರ ಯುವಕರ ಸಂಘಗಳನ್ನು ಸ್ಥಾಪಿಸಲಾಗುವುದು. ಭಾರತ ಜೋಡೋ ಯುವ ಸಂಘಗಳ ಸ್ಥಾಪನೆಗೆ ಒಂದು ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗುವುದು. ಪ್ರತಿ ಕ್ಷೇತ್ರದಲ್ಲಿ ಬಡವರಿಗೆ ಐದರಿಂದ ಹತ್ತು ಸಾವಿರ ನಿವೇಶನಗಳನ್ನು ನೀಡಲು ಕ್ರಮ ವಹಿಸಲಾಗುವುದು. ಪ್ರತಿ ತಾಲ್ಲೂಕಿನಲ್ಲೂ ಕೈಗಾರಿಕಾ ಪಾರ್ಕ್ ಸ್ಥಾಪನೆಗೆ ಯೋಜನೆ ರೂಪಿಸಲಾಗುತ್ತಿದೆ ಎಂದರು.

---

ಸುಪ್ರೀಂಕೋರ್ಟ್ ಆದೇಶದ ಅನ್ವಯ ಪಾದಚಾರಿ ಮಾರ್ಗ ಒತ್ತುವರಿ ತೆರವುಗೊಳಿಸಲಾಗುತ್ತಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಬೀದಿ ವ್ಯಾಪಾರಿಗಳ ಜಂಟಿ ಹೋರಾಟ ಸಮಿತಿಯ ಪದಾಧಿಕಾರಿಗಳ ಜೊತೆ ಇಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರ ಬಡವರ ಪರವಾಗಿದ್ದು, ನಾಗರಿಕರು ಓಡಾಡು ಸುಗಮ ಮಾರ್ಗ ನಿರ್ಮಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

ಪಾದಚಾರಿ ಮಾರ್ಗಗಳಲ್ಲಿ ಜನರು ಓಡಾಡಲು ಸುಗಮ ಮಾರ್ಗವಿರಬೇಕು. ಅದರಲ್ಲಿ ಯಾವುದೇ ರಾಜಿಯಿಲ್ಲ. ನಗರದಲ್ಲಿ ನಿನ್ನೆಯವರೆಗೆ ೪೩೦ ಕಿಲೋ ಮೀಟರ್ ಒತ್ತುವರಿ ತೆರವು ಮಾಡಲಾಗಿದೆ. ಇದನ್ನು ನಿರಂತರವಾಗಿ ಮುಂದುವರೆಸಲಾಗುವುದು ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಪಾರ್ಕಿಂಗ್, ಗಾರ್ಡನ್ ಸೇರಿದಂತೆ ಪಾದಚಾರಿ ಮಾರ್ಗಗಳಲ್ಲಿರುವ ಎಲ್ಲಾ ಅಡೆತಡೆಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು, ಸುಪ್ರೀಂಕೋರ್ಟ್ ಆದೇಶ ಹಾಗೂ ಬೀದಿ ಬದಿ ವ್ಯಾಪಾರಿಗಳಿಗಾಗಿ ಇರುವ ಕಾಯ್ದೆ, ಕಾನೂನು ಅನುಷ್ಠಾನ ಪಾಲಿಸಲು ಕ್ರಮ ವಹಿಸಲಾಗುವುದು ಎಂದರು.

ಸುಪ್ರೀಂಕೋರ್ಟ್ ನಿರ್ದೇಶನದಂತೆ ಹೊಸ ಗುರುತಿನ ಚೀಟಿಗಳನ್ನು ತ್ವರಿತಗತಿಯಲ್ಲಿ ವಿತರಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಕೃಷ್ಣಬೈರೇಗೌಡ ತಿಳಿಸಿದರು.

---

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲೂಕಿನ ಅರಬೈಲ್ ಘಟ್ಟದ ಬಳಗಾರ್ ಸಮೀಪ ರಾಷ್ಟ್ರೀಯ ಹೆದ್ದಾರಿ ೫೨ ರಲ್ಲಿ ಇಂದು ಮುಂಜಾನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಆರು ಮಂದಿ ಮೃತಪಟ್ಟಿದ್ದು, ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಘಟನೆ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಹಾರೈಸಿದ್ದಾರೆ.

---

ರಾಜ್ಯದ್ಯಾಂತ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ- ಎಸ್‌ಐಆರ್ ನಡೆಯುತ್ತಿದ್ದು, ಜನರಲ್ಲಿ ಈ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

ತುಮಕೂರು ತಾಲೂಕು ಪಂಚಾಯಿತಿ ವತಿಯಿಂದ ಇಂದು ಕೆಸರಮಡು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಆಯೋಜಿಸಿದ್ದ ಮತದಾರರ ಜಾಗೃತಿ ಜಾಥಾಕ್ಕೆ ತಾಲೂಕು ಪಂಚಾಯಿತಿ ಸಹಾಯಕ ಲೆಕ್ಕಾಧಿಕಾರಿ ಪರಮೇಶ್ವರ ಹೆಚ್.ಕೆ. ಚಾಲನೆ ನೀಡಿದರು.

ಈ ವೇಳೆ ಅವರು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ, ಮೃತ ಹಾಗೂ ಸ್ಥಳಾಂತರ ಗೊಂಡ ಮತದಾರರ ಹೆಸರನ್ನು ತೆಗೆದು ಹಾಕುವ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಜಾಥಾದಲ್ಲಿ ಗ್ರಾಮಪಂಚಾಯಿತಿ ಪ್ರತಿನಿಧಿಗಳು, ಬೂತ್ ಮಟ್ಟದ ಅಧಿಕಾರಿಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಪಾಲ್ಗೊಂಡಿದ್ದರು.

ವಿಜಯಪುರದಲ್ಲಿ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ, ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ನೈಜ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯದಂತೆ ಮತ್ತು ಅನರ್ಹ ಮತದಾರರನ್ನು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಗೆ ಸೇರ್ಪಡೆಯಾಗದಂತೆ ಕ್ರಮ ವಹಿಸಲು ಎಲ್ಲ ರಾಜಕೀಯ ಪಕ್ಷಗಳು ಹಾಗೂ ಮತದಾರರು ಸಹಕರಿಸಬೇಕು ಎಂದರು. ಈವರೆಗೆ ೧ ಲಕ್ಷದ ೮೪ ಸಾವಿರದ ೩೪ ಮತದಾರರ ಗಣತಿ ನಮೂನೆ ವಿತರಿಸಲಾಗಿದೆ ಎಂದು ತಿಳಿಸಿದರು.

ಸುಭದ್ರ ಪ್ರಜಾಪ್ರಭುತ್ವದ ಬುನಾದಿಯಾಗಿರುವ ಮತದಾರರ ಪಟ್ಟಿಯನ್ನು ಸಂಪೂರ್ಣ ದೋಷರಹಿತವಾಗಿ ಸಿದ್ಧಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ರೋಲ್ ವೀಕ್ಷಕರಾದ ತುಳಸಿ ಮದ್ದಿನೇನಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಪಾಡಲು ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ಚಿತ್ರದುರ್ಗ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಮನವಿ ಮಾಡಿದ್ದಾರೆ. ಜಿಲ್ಲೆಯಲ್ಲಿ ಗಣತಿ ನಮೂನೆಗಳ ವಿತರಣೆ ಶೇಕಡಾ ೯೮ರಷ್ಟು ಪೂರ್ಣಗೊಂಡಿದೆ ಎಂದು ಅವರು ಮಾಹಿತಿ ನೀಡಿದರು. ಎಸ್‌ಐಆರ್ ಕುರಿತು ಮೈಸೂರು ಚಾಮುಂಡಿಬೆಟ್ಟದಲ್ಲಿ ಜಾಗೃತಿ ಜಾಥಾ ನಡೆಸಿ ಭಕ್ತಾಧಿಗಳು, ಪ್ರವಾಸಿಗರು ಹಾಗೂ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.  ಈ ವೇಳೆ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಿ.ಕೃಷ್ಣ, ಪ್ರತೀ ಗ್ರಾಮ ಪಂಚಾಯಿತಿಯಲ್ಲಿ ಸಹಾಯ ಮತ್ತು ಸೌಲಭ್ಯ ಕೇಂದ್ರ ತೆರೆಯಲಾಗಿದ್ದು, ಮಾಹಿತಿ, ಅರ್ಜಿ ನಮೂನೆ ಇತರ ಸೌಲಭ್ಯಕ್ಕೆ ಭೇಟಿ ನೀಡಬಹುದು ಎಂದು ತಿಳಿಸಿದರು.

---

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ಜಾಲಿಬೇರಿ ಸಮೀಪ ಘಟಪ್ರಭಾ ನದಿಗೆ ಅಡ್ಡಲಾಗಿ ನಿರ್ಮಾಣಗೊಳ್ಳಲಿರುವ ರೈಲ್ವೆ ಸೇತುವೆ ಕಾಮಗಾರಿಯನ್ನು ವೈಜ್ಞಾನಿಕವಾಗಿ ಹಾಗೂ ರೈತರ ಹಿತಾಸಕ್ತಿಗೆ ಧಕ್ಕೆಯಾಗದ ರೀತಿಯಲ್ಲಿ ಕೈಗೊಳ್ಳಬೇಕು ಎಂದು ಸಂಸದ ಪಿ.ಸಿ.ಗದ್ದಿಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬಾಗಲಕೋಟೆ ಕುಡಚಿ ರೈಲು ಮಾರ್ಗ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸೇತುವೆ ನಿರ್ಮಾಣದ ವೇಳೆ ಪ್ರವಾಹದ ಪರಿಸ್ಥಿತಿ, ನೀರಿನ ಹರಿವು ಹಾಗೂ ರೈತರ ಜಮೀನುಗಳಿಗೆ ಯಾವುದೇ ತೊಂದರೆಯಾಗದಂತೆ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ನಿಗದಿತ ಅವಧಿಯೊಳಗೆ ಯೋಜನೆ ಪೂರ್ಣಗೊಂಡರೆ ರೈಲು ಸಂಚಾರಕ್ಕೆ ಅನುಕೂಲವಾಗುವುದರ ಜೊತೆಗೆ ಜಿಲ್ಲೆಯ ಮೂಲಸೌಕರ್ಯ ಅಭಿವೃದ್ಧಿಗೂ ವೇಗ ಸಿಗಲಿದೆ ಎಂದು ಅವರು ಹೇಳಿದರು.

---

ಇನ್ನು ಹವಾವರ್ತಾಮಾನ...

ರಾಜ್ಯದ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿದ್ದು, ಕರಾವಳಿಯಲ್ಲಿ ದುರ್ಬಲವಾಗಿತ್ತು. ಉತ್ತರ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗಿದೆ.

ಆಗುಂಬೆಯಲ್ಲಿ ೯ ಸೆಂಟಿಮೀಟರ್, ಬಾಗಮಂಡಲಾ ೮, ನಾಪೋಕ್ಲುವಿನಲ್ಲಿ ೭, ಕಮ್ಮರಡಿ, ಕೊಟ್ಟಿಗೆಹಾರ, ಸೋಮರಾರಪೇಟೆಯಲ್ಲಿ ತಲಾ ೬, ಗೇರುಸೊಪ್ಪ, ಕೊಪ್ಪ ೫, ಬೆಳ್ತಂಗಡಿ, ಧರ್ಮಸ್ಥಳ, ಖಾನಾಪುರ, ಲೋಂಡಾ, ಶೃಂಗೇರಿ, ತಾಳಗುಪ್ಪ ದಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ.

ಮುಂದಿನ ೨೪ ಗಂಟೆಗಳಲ್ಲಿ ಮಲೆನಾಡು ಮತ್ತು ಕೊಡಗು ಜಿಲ್ಲೆಯಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಮತ್ತು ಉತ್ತರ ಒಳನಾಡಿನಲ್ಲಿ ಹಗುರದಿಂದ ಸಾಧಾರಣ ಮಳೆ ನಿರೀಕ್ಷೆಯಿದೆ.

ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೯, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗುವ ಸಂಭವ.

____________ ಮುಕ್ತಾಯ _________